ಗೌರಿಬಿದನೂರು ತಾಲ್ಲೂಕಿನಲ್ಲಿ ದಿನಾಂಕ: 01–01–2010 ರಿಂದ 28–02–2011 ರವರೆಗೆ 43 ಮೊಕದ್ದಮೆಗಳನ್ನು ದಾಖಲಿಸಿ, 27 ಆರೋಪಿಗಳನ್ನು ದಸ್ತಗಿರಿಮಾಡಿ, 76.690 ಲೀ ಮದ್ಯ, 9.780 ಲೀ ಬೀರ್ 122 ಲೀ ಸೇಂದಿ, 12 ಲೀ ಕಳ್ಳಭಟ್ಟಿ ಸಾರಾಯಿ ವಶಪಡಿಸಿಕೊಂಡು 10 ವಿವಿಧ ಬಗೆಯ ವಾಹನಗಳನ್ನು ಜಪ್ತಿಪಡಿಸಲಾಗಿರುತ್ತದೆ.

ಕಾಲೇಜು ಕೊಠಡಿಗಳ ನಿರ್ಮಾಣ

534 (487) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್ (ಗೌರಿಬಿದನೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಪ್ರಥಮ ದರ್ಜೆ ಕಾಲೇಜು ಮಂಜೂರಾಗಿ ಕಟ್ಟಡ ನಿರ್ಮಾಣವಾಗುತ್ತಿರುವುದು ನಿಜವೇ; ಕೇವಲ ನಾಲ್ಕು ಕೊಠಡಿಗಳು ನಿರ್ಮಾಣವಾಗುತ್ತಿದ್ದು, ಈಗಿನ ಎಲ್ಲಾ ಪದವಿ ಕೋರ್ಸುಗಳನ್ನು ನಡೆಸಲು ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ನಡೆಸಲು ಆಗದೇ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಪದವಿಯ ಎಲ್ಲಾ ಕೋರ್ಸುಗಳನ್ನು ನಡೆಸಲು ಹೆಚ್ಚಿನ ಕೊಠಡಿಗಳನ್ನು ನಿರ್ಮಿಸುವ ಸಲುವಾಗಿ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು?

ಡಾ॥ ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು ಬಂದಿದೆ.

ಆ) ಅನುದಾನದ ಲಭ್ಯತೆಯನುಸಾರ ಹಂತ ಹಂತವಾಗಿ ಬಿಡುಗಡೆ ಮಾಡಲಾಗುವುದು.

ನರ್ಮ್ ಯೋಜನೆಯ ಅಡಿಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಮಂಜೂರಾದ ಅನುದಾನ

535 (488) ಶ್ರೀ ಶಿವಶಂಕರ್ ರೆಡ್ಡಿ ಎನ್.ಹೆಚ್ (ಗೌರಿಬಿದನೂರು) : ಮಾನ್ಯ ನಗರಾಭಿವೃದ್ಧಿ, ಕಾನೂನು ಹಾಗೂ ಸಂಸದೀಯ ವ್ಯವಹಾರಗಳು, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?